ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೆ 2008ನೇ ಸಾಲಿನ ಕರ್ನಾಟಕ ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"2008ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಬಿ.ಎಸ್.ಯಡಿಯೂರಪ್ಪ (ಮುಖ್ಯಮಂತ್ರಿಗಳು):- ಮಾನ್ಯ ಅಧ್ಯಕ್ಷರೆ 2008ನೇ ಸಾಲಿನ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ-III)

4.ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ, 2008

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು):- ಮಾನ್ಯ ಅಧ್ಯಕ್ಷರೆ 2008ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:- ಪ್ರಸ್ತಾವ ಏನೆಂದರೆ,

"2008ರ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಆರ್.ಅಶೋಕ್ (ಸಾರಿಗೆ ಸಚಿವರು):- ಮಾನ್ಯ ಅಧ್ಯಕ್ಷರೆ 2008ನೇ ಸಾಲಿನ ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:- ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ-IV)

5.ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕ, 2008

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು):- ಮಾನ್ಯ ಅಧ್ಯಕ್ಷರೆ 2008ನೇ ಸಾಲಿನ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು:– ಪ್ರಸ್ತಾವ ಏನೆಂದರೆ,

"2008ರ ಕರ್ನಾಟಕ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಜಿ.ಕರುಣಾಕರ ರೆಡ್ಡಿ (ಕಂದಾಯ ಸಚಿವರು):– ಮಾನ್ಯ ಅಧ್ಯಕ್ಷರೆ 2008ನೇ ಸಾಲಿನ ಸ್ಟಾಂಪು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು:– ವಿಧೇಯಕವನ್ನು ಮಂಡಿಸಲಾಗಿದೆ.

(ಅನುಬಂಧ–V)

1. ಕರ್ನಾಟಕ ಧನವಿನಿಯೋಗ ವಿಧೇಯಕ,2008

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್.ಯಡಿಯೂರಪ್ಪ[ಮುಖ್ಯಮಂತ್ರಿಗಳು]: ಮಾನ್ಯ ಅಧ್ಯಕ್ಷರೆ, 2008ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "2008ರ ಕರ್ನಾಟಕ ಧನವಿನಿಯೋಗ ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ 2 ಮತ್ತು 3: ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು: "ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ 2 ಮತ್ತು 3ನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ 1 ಇತ್ಯಾದಿ:

ಅಧ್ಯಕ್ಷರು: ಪ್ರಸ್ತಾವ ಏನೆಂದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವದ ಅಂಗೀಕಾರ